ಶ್ರೀ ಎಂ. ಚಂದ್ರಶೇಖರ್.—ಆದರ ಬಗ್ಗೆ ಆತಂಕ ಬೇಕಾಗಿಲ್ಲ, ಭಯಪಡಬೇಕಾಗಿಲ್ಲ. ೧೫ ಸಾವಿರ ರೂಪಾಯಿಗಳನ್ನು ಕೊಟ್ಟಂತಹ ಮಾಹಿತಿ ಇದ ರೆ ನೇರವಾಗಿ ಹೇಳಬಹುದು, ದಾಖಲೆ ಕೊಡ ಬಹುದು. ಆ ಬಗ್ಗೆ ಕ್ರಮ ಕೈಗೊಳ್ಳಬೇಕಾಗುತ್ತದೆ, ತನಿಖೆ ಮಾಡಬೇಕಾಗುತ್ತದೆ. ಕ್ರಮ ಕೈಗೊಳ್ಳುವುದಕ್ಕೆ ಸರ್ಕಾರ ಹಿಂಜರಿಯಂವುದಿಲ್ಲ. ಆ ರೀತಿ ಮಾಹಿತಿ ಸರ್ಕಾರದ ಗಮನದಲ್ಲಿಲ್ಲ.

ದಿನದ ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳ ಪಟ್ಟಿಗಳು

ಬಾಗಲಕೋಟೆಯಂನ್ನು ಹೊಸದಾಗಿ ಕಟ್ಟುವ ಬಗ್ಗೆ

೨೩. ಶ್ರೀ ಕೆ. ಎಚ್. ಪಾಟೀಲ್ (ಗದಗ್).— ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸಂವರೇ ?

೧) ಬಾಗಲಕೋಟೆಯ ಹೊಸ ನಿರ್ಮಾಣ ಯಾವ ಮಂಟ್ಟಕ್ಕೆ ಬಂದಿದೆ. ನಗರವನ್ನು ಸ್ಥಳಾಂತರ ಮಾಡುವುದಕ್ಕೆ ಏನಂ ಕ್ರಮ ತೆಗೆದುಕೊಂಡಿದ್ದೀರಿ.

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಸಚಿವರು).—

೧) ಬಾಗಲಕೋಟೆ ಪುನರ್ವಸತಿ ಯೋಜನೆಯು ಕೃಷ್ಣ ಬೇಲ್ದಂಡೆ ಯೋಜನೆಯಡಿಯಲ್ಲಿ ಇನ್ನೂ ಯೋಜನಾ ತಯಾರಿಕೆಯ ಹಂತದಲ್ಲಿಯೆ. ನಿರ್ಮಾಣ ಕಾರ್ಯಕ್ರಮ ಇನ್ನೂ ಪ್ರಾರಂಭವಾಗಿಲ್ಲ.

ಅಲ್ಪ ಸಂಖ್ಯಾತರಂ ಮತ್ತು ಇತರ ಕನ್ನಡೇತರರಿಗೆ ಕನ್ನಡ ಕಲಿಸುವ ಬಗ್ಗೆ

೧೫೪. ಶ್ರೀ ಆರ್. ರೋಷನ್ ಬೇಗ್ (ಶಿವಾಜಿನಗರ) ವಾರ್ತಾ ಪ್ರವಾಸೋದ್ಯಮಂ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸಂವರೇ ?

ಅ) ಅಲ್ಪಸಂಖ್ಯಾತರು ಮತ್ತು ಇತರ ಕನ್ನಡೇತರರಿಗೆ ಕನ್ನಡ ಕಲಿಸಲು ಮತ್ತು ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಆ ಬಗ್ಗೆ ಸೌಲಭ್ಯಗಳನ್ನು ಕಲ್ಪಿಸಲಂ ನಿಧಿಗಳನ್ನು ಹಂಚಿಕೆ ಮಾಡುವುದು ಇಲಾಖೆಯ ಕರ್ತವ್ಯವಲ್ಲವೇ ?

ಆ) ಕನ್ನಡೇತರರಿಗೆ ಅಂದರೆ ಅಲ್ಪಸಂಖ್ಯಾತರಿಗೆ ಕನ್ನಡ ಕಲಿಸಲು ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಯಾವ ಸೌಲಭ್ಯಗಳನ್ನೂ ಒದಗಿಸಿಲ್ಲವೆಂಬುದು ಸರ್ಕಾರಕ್ಕೆ ತಿಳಿದಿದೆಯೇ ?

ಇ) ಹಾಗಿದ್ದಲ್ಲಿ ಅಲ್ಪಸಂಖ್ಯಾತರಿಗೆ ಹಾಗೂ ಇತರ ಕನ್ನಡೇತರರಿಗೆ ಕನ್ನಡ ಕಲಿಸಲು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯವು ಯಾವ ಕ್ರಮಗಳನ್ನು ತೆಗೆದುಕೊಂಡಿದೆ.

ಶ್ರೀ ಎಂ. ಪಿ. ಪ್ರಕಾಶ್ (ವಾರ್ತಾ ಪ್ರವಾಸೋದ್ಯಮ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು).—

ಅ) ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯವು ಕನ್ನಡ ಅಭಿವೃದಿ ಯೋಜನೆಯಡಿ ಕನ್ನಡ ಬಾರದವರಿಗೆ ಕನ್ನಡ ಕಲಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕರ ಮೂಲಕ ತಾಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲೂ ಕೂಡಾ ಈ ಕನ್ನಡ ಕಲಿಸಂವ ಕಾರ್ಯಕ್ರಮ ನಡೆಯುತ್ತಿದೆ.

ಆ) ಅಲ್ಪಸಂಖ್ಯಾತರಿಗೆ ಹಾಗೂ ಕನ್ನಡ ಭಾರದವರಿಗೆ ಕನ್ನಡ ಕಲಿಸುವ ಅಗತ್ಯವನ್ನು ಮನ ಗಂಡು ಕನ್ನಡ ಕಲಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

ಇ) ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯವು ಕನ್ನಡ ಅಭಿವೃದ್ಧಿ ಯೋಜನೆಯಡಿ ಕನ್ನಡ ವನ್ನು ಆಡಳಿತ ಎಲ್ಲಾ ಹಂತಗಳಲ್ಲೂ ಪರಿಣಾಮಕಾರಿಯಾಗಿ ಬಳಕೆಗೆ ತರಲು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದೆ. ಅವುಗಳಲ್ಲಿ ಕನ್ನಡ ಬಾರದವರಿಗೆ ಕನ್ನಡ ಕಲಿಸುವ ಕಾರ್ಯಕ್ರಮ ಒಂದು. ಈ ಕಾರ್ಯ ಕ್ರಮದಡಿ ೬ ತಿಂಗಳಲ್ಲಿ ಸಾರ್ವಜನಿಕರೂ ಸೇರಿದಂತೆ ಕನ್ನಡ ಬಾರದವರಿಗೆ ಮಾತನಾಡಲು, ಬರೆಯಂಲು

ಮತ್ತು ಓದಲು ಕನ್ನಡ ಕಲಿಸಲಾಗುತ್ತಿದೆ. ಕನ್ನಡ ಬಾರದ ಜನರಿರುವ ಪ್ರದೇಶಗಳಲ್ಲಿ ಮತ್ತು ಅಲ್ಲಿನ ಸ್ಥಳೀಯ ಸಂಘ ಸಂಸ್ಥೆಗಳ ಸಹಕಾರದಿಂದ ಈ ಕನ್ನಡ ತರಬೇತಿ ಶಿಬಿರವನ್ನು ರಾಜ್ಯಾದಂತ ನಡೆಸಲಾಗುತ್ತಿದೆ. ವರ್ಷಕ್ಕೆ ಅನೇಕ ಕೇಂದ್ರಗಳಲ್ಲಿ ಈ ತರಗತಿಗಳು ನಡೆಯುತ್ತಾ ಬಂದಿದೆ ಇದಲ್ಲದೆ ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆಯ ಸಹಕಾರದಿಂದ ಸರ್ಕಾರದ ಎಲ್ಲಾ ಮಟ್ಟದ ಕನ್ನಡ ಬಾರದ ಅಧಿಕಾರಿಗಳು ಹಾಗೂ ನೌಕರರು ಕೇಂದ್ರ ಸರ್ಕಾರದ ಕಛೇರಿಗಳ ಕಾರ್ಖಾನೆ ಹಾಗೂ ಬ್ಯಾಂಕುಗಳ ಸಿಬ್ಬಂದಿವರ್ಗ, ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳ, ಮಂಡಳಿಗಳ, ಕಾರ್ಪೊರೇಷನ್‌ಗಳ ಸಿಬ್ಬಂದಿಗೆ ಅಂಚೆ ಮೂಲಕ ಕನ್ನಡ ಕಲಿಸಲಾಗುತ್ತಿದೆ. ಇದು ಒಂದು ವರ್ಷದ ಶಿಬಿರ. ಮೇಲೆ ತಿಳಿಸಿದಂತೆ ಕನ್ನಡ ಕಲಿಕೆಗೆ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ಮೂಲಕ ಅವಕಾಶ ಕಲ್ಪಿಸಲಾಗಿದೆ.

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು) ಮಾನ್ಯ ಅಧ್ಯಕ್ಷರೆ. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಎಂಟನೇ ಪಟ್ಟಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಲಿಖಿತ ಉತ್ತರಗಳು

ರೇವಿನ್ಯೂ ನಿವೇಶನದಾರರ ಸಮಸ್ಯೆಗಳ ಬಗ್ಗೆ

೪೭೮. ಶ್ರೀ ಎಂ.ಎಸ್. ಕೃಷ್ಣನ್ (ರಾಜಾಜಿನಗರ).— ಮಾನ್ಯ ವಾರ್ತಾ, ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರಿನ ಸುತ್ತ ಮುತ್ತಲೂ ಸಾವಿರಾರು ಕಾರ್ಮಿಕರು, ಮಧ್ಯಮ ವರ್ಗದವರು ಸರ್ಕಾರಿ ನೌಕರರು ನಿವೇಶನಗಳನ್ನು ಕೊಂಡಿರುವುದು ಹಾಗೂ ಕೆಲವರು ಮನೆ ಕಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಅನೇಕ ಮನೆಗಳನ್ನು ಬಿ.ಡಿ.ಎ.ಅಧಿಕಾರಿಗಳು ವಿಕಾವಿಕಿ ಕೆಡವಿರುವುದರಿಂದ, ಒಬ್ಬೊಬ್ಬರಿಗೂ ಸಾವಿರಾರು ರೂಪಾಯಿಗಳು ನಷ್ಟವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಈ ರೇವಿನ್ಯೂ ನಿವೇಶನದಾರರ ಸಮಸ್ಯೆಯನ್ನು ಮಾನವೀಯತೆ ದೃಷ್ಟಿಯಿಂದ ಬಗೆಹರಿಸುವುದಾಗಿ ಸರ್ಕಾರದವರು ಭರವಸೆ ಕೊಟ್ಟಿರುವುದು ಸರ್ಕಾರದವರ ಗಮನಕ್ಕೆ ಗಮನದಲ್ಲಿದೆಯೇ ?

ಈ) ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಂ.ಪಿ. ಪ್ರಕಾಶ್ (ವಾರ್ತಾ, ಪ್ರವಾಸೋದ್ಯಮ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವರು).—

ಅ) ಹೌದು.

ಆ) ಇಲ್ಲ.

ಇ) ರೇವಿನ್ಯೂ ನಿವೇಶನಗಳನ್ನು ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿದೆ.

ಸುಬ್ರಮಣ್ಯ ನಗರದಲ್ಲಿ ಆಟದ ಮೈದಾನ ಮತ್ತು ಸರ್ಕಾರಿ ಶಾಲೆ ಸ್ಥಾಪನೆ ಬಗ್ಗೆ

೪೭೯. ಶ್ರೀ ಎಂ.ಎಸ್. ಕೃಷ್ಣನ್ (ರಾಜಾಜಿನಗರ).—ಮಾನ್ಯ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜಾಜಿನಗರದ ವಿಧಾನಸಭಾ ಕ್ಷೇತ್ರದಲ್ಲಿರುವ ಸುಬ್ರಮಣ್ಯ ನಗರದಲ್ಲಿ ಕೆರೆ ಅಂಗಳದ ಎರಡು ಭಾಗಗಳಲ್ಲಿ ಒಂದೆಡೆ ಆಟದ ಮೈದಾನವನ್ನು, ಇನ್ನೊಂದೆಡೆ ಸರ್ಕಾರಿ ಶಾಲೆಯನ್ನು ಕಟ್ಟಿಸಿಕೊಡ